**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.07.2025 1.10 p.m.**

ಮುಖ್ಯಾಂಶಗಳು

1. ಲೋಕಸಭೆಯಲ್ಲಿ ಆಪರೇಷನ್ ಸಿಂದೂರ ಕಾರ್ಯಚರಣೆ ಕುರಿತು ಚರ್ಚೆ ಮುಂದುವರಿಕೆ
2. ಫಿಡೆ ವಿಶ್ವಕಪ್ ಗೆದ್ದ ದಿವ್ಯಾ ದೇಶ್ ಮುಖ್ ಗೆ ಸಂಸತ್ತಿನ ಉಭಯ ಸದನಗಳಲ್ಲಿ ಅಭಿನಂದನೆ
3. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಜಾರಿಗೆ ಇಂದಿಗೆ ೫ ವರ್ಷ; ದೆಹಲಿಯಲ್ಲಿ ಇಂದು ಭಾರತೀಯ ಶಿಕ್ಷಾ ಸಮಾಗಮ್ ಕ್ಕೆ ಸಚಿವ ಧರ್ಮೇಂದ್ರ ಪ್ರಧಾನ್ ಚಾಲನೆ
4. ಇಂದು ಅಂತಾರಾಷ್ಟ್ರೀಯ ಹುಲಿ ದಿನ ಆಚರಣೆ: ಹುಲಿಗಳ ನೈಸರ್ಗಿಕ ಆವಾಸಸ್ಥಾನಗಳ ಸಂರಕ್ಷಣೆಗೆ ವಿಶ್ವಾದ್ಯಂತ ಜಾಗೃತಿ

<><><><>

ಪಾಕಿಸ್ತಾನದಲ್ಲಿ ಭಯೋತ್ಪಾದಕರ ವಿರುದ್ಧ ನಡೆಸಲಾದ ಆಪರೇಷನ್ ಸಿಂದೂರ ಸೇನಾ ಕಾರ್ಯಚರಣೆ ಕುರಿತು ಲೋಕಸಭೆಯಲ್ಲಿ ಇಂದು ಕೂಡ ಚರ್ಚೆ ಮುಂದುವರಿದಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಚರ್ಚೆಯಲ್ಲಿ ಪಾಲ್ಗೊಂಡು ಪ್ರತಿಪಕ್ಷಗಳ ಸದಸ್ಯರ ಪ್ರಶ್ನೆಗಳಿಗೆ ಉತ್ತರ ಮುಂದುವರಿಸಿದ್ದಾರೆ. ಪಹಾಲ್ಗಾಮ್ ಭಯೋತ್ಪಾದರ ದಾಳಿಗೆ ಪ್ರತ್ಯುತ್ತರವಾಗಿ ಭಾರತ ಆಪರೇಷನ್ ಸಿಂದೂರ ಕಾರ್ಯಚರಣೆ ಮೂಲಕ ಭಯೋತ್ಪಾದಕರ ನೆಲೆಗಳನ್ನು ಧ್ವಂಸಗೊಳಿಸಿ, ಹಲವರ ಹತ್ಯೆಗೈದಿತ್ತು.

<><><><>

ಸದನದಲ್ಲಿ ಪ್ರತಿಪಕ್ಷಗಳ ಕೋಲಾಹಲದ ನಂತರ ರಾಜ್ಯಸಭೆಯ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಯಿತು. ಸದನ ಆರಂಭವಾಗುತ್ತಿದ್ದಂತೆಯೇ ಉಪಸಭಾಪತಿ ಹರಿವಂಶ್ ಶೂನ್ಯ ವೇಳೆಯನ್ನು ನಡೆಸಲು ಪ್ರಯತ್ನಿಸಿದರು. ಆದರೆ ವಿರೋಧ ಪಕ್ಷದ ಸದಸ್ಯರು ಬಿಹಾರದ ಎಸ್ಐಆರ್ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಚರ್ಚೆಗೆ ಒತ್ತಾಯಿಸಿ ಗದ್ದಲ ಎಬ್ಬಿಸಿದರು. ಹೀಗಾಗಿ ಸದನವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಯಿತು.

<><><><>

ಫಿಡೆ ಮಹಿಳಾ ಚೆಸ್ ವಿಶ್ವಕಪ್ ಗೆದ್ದ ದಿವ್ಯಾ ದೇಶ್ಮುಖ್ ಅವರನ್ನು ಸಂಸತ್ತಿನ ಉಭಯ ಸದನಗಳ ಸದಸ್ಯರು ಇಂದು ಶ್ಲಾಘಿಸಿದರು. ರಾಜ್ಯಸಭೆಯಲ್ಲಿ ಉಪ ಸ್ಪೀಕರ್ ಹರಿವಂಶ್ ಮಾತನಾಡಿ, ದಿವ್ಯಾ ದೇಶ್ ಮುಖ್ ಪಂದ್ಯಾವಳಿಯನ್ನು ಗೆಲ್ಲುವ ಮೂಲಕ ರಾಷ್ಟ್ರವನ್ನು ಹೆಮ್ಮೆಪಡುವಂತೆ ಮಾಡಿದ್ದಾರೆ. ಅವರು ಚಿಕ್ಕ ವಯಸ್ಸಿನಲ್ಲಿಯೇ ಗಮನಾರ್ಹ ಕೌಶಲ್ಯ ಮತ್ತು ಸ್ಥಿತಿಸ್ಥಾಪಕತ್ವವನ್ನು ಪ್ರದರ್ಶಿಸಿದ್ದಾರೆ ಮತ್ತು ಅವರ ಪ್ರಯಾಣವು ಯುವ ಪೀಳಿಗೆಗೆ ಸ್ಫೂರ್ತಿಯಾಗಿದೆ ಎಂದು ಹೇಳಿದರು. ಲೋಕಸಭೆಯಲ್ಲಿ ಸ್ಪೀಕರ್ ಓಂ ಬಿರ್ಲಾ ಅವರು ದಿವ್ಯಾ ದೇಶ್ ಮುಖ್ ಅವರನ್ನು ಶ್ಲಾಘಿಸಿ, ಇಡೀ ದೇಶವು ದಿವ್ಯಾ ದೇಶ್ ಮುಖ್ ಅವರ ಗೆಲುವಿನಿಂದ ಹರ್ಷಗೊಂಡಿದೆ. ಫಿಡೆ ಮಹಿಳಾ ಚೆಸ್ ವಿಶ್ವಕಪ್ ನ ಫೈನಲ್ ತಲುಪಿದ ಇಬ್ಬರೂ ಭಾರತೀಯ ಮಹಿಳೆಯರು ಎಂದು ಅವರು ಸಂತೋಷ ವ್ಯಕ್ತಪಡಿಸಿದರು.

<><><><>

ರಾಷ್ಟ್ರೀಯ ಶಿಕ್ಷಣ ನೀತಿ-ಎನ್.ಇ.ಪಿ ೨೦೨೦ರ ೫ನೇ ವಾರ್ಷಿಕೋತ್ಸವದ ಅಂಗವಾಗಿ ಶಿಕ್ಷಣ ಸಚಿವಾಲಯವು ಅಖಿಲ ಭಾರತೀಯ ಶಿಕ್ಷಾ ಸಮಾಗಮ್- ೨೦೨೫ ಅನ್ನು ದೆಹಲಿಯ ಭಾರತ್ ಮಂಟಪಂ ಆವರಣದಲ್ಲಿ ಇಂದು ಆಯೋಜಿಸಿದೆ. ದಿನವಿಡೀ ನಡೆಯುವ ಕಾರ್ಯಕ್ರಮಕ್ಕೆ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಚಾಲನೆ ನೀಡಿದರು. ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಐದನೇ ವಾರ್ಷಿಕೋತ್ಸವವನ್ನು ಗುರುತಿಸುವ ಅಖಿಲ ಭಾರತೀಯ ಶಿಕ್ಷಾ

ಸಮಾಗಮ್ - ಎ.ಬಿ.ಎಸ್.ಎಸ್, ಶಿಕ್ಷಣ ತಜ್ಞರು, ನೀತಿ ನಿರೂಪಕರು, ಉದ್ಯಮದ ಮುಖಂಡರು ಮತ್ತು ಸರ್ಕಾರಿ ಪ್ರತಿನಿಧಿಗಳಿಗೆ ಎನ್.ಇ.ಪಿ ೨೦೨೦ ರ ಅಡಿಯಲ್ಲಿ ಸಾಧಿಸಿದ ಗಮನಾರ್ಹ ಪ್ರಗತಿಯನ್ನು ಪರಿಶೀಲಿಸಲು ಮತ್ತು ಮುಂದಿನ ಹಾದಿಯನ್ನು ರೂಪಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.

<><><>

ಇಂದು ಅಂತಾರಾಷ್ಟ್ರೀಯ ಹುಲಿ ದಿನವನ್ನು ಆಚರಿಸಲಾಗುತ್ತಿದೆ. ಹುಲಿಗಳ ನೈಸರ್ಗಿಕ ಆವಾಸಸ್ಥಾನಗಳನ್ನು ಸಂರಕ್ಷಿಸಲು ಮತ್ತು ವಿಶ್ವಾದ್ಯಂತ ಸಂರಕ್ಷಣಾ ಪ್ರಯತ್ನಗಳಿಗೆ ಸಾರ್ವಜನಿಕವಾಗಿ ಜಾಗೃತಿ ಮತ್ತು ಬೆಂಬಲವನ್ನು ಹೆಚ್ಚಿಸಲು ಪ್ರತಿವರ್ಷ ಜುಲೈ ೨೯ ರಂದು ಜಾಗತಿಕವಾಗಿ ಈ ದಿನವನ್ನು ಆಚರಿಸಲಾಗುತ್ತದೆ. ಜಾಗತಿಕ ಹುಲಿ ದಿನಾಚರಣೆಯ ಸಂದರ್ಭದಲ್ಲಿ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಹುಲಿ ಸಂರಕ್ಷಣೆಯಲ್ಲಿ ಭಾರತದ ಗಮನಾರ್ಹ ಯಶಸ್ಸನ್ನು ಬಿಂಬಿಸಿದರು. ೫೮ ಮೀಸಲು ಪ್ರದೇಶಗಳು ಮತ್ತು ೩ ಸಾವಿರದ ೬೮೨ ಹುಲಿಗಳೊಂದಿಗೆ, ಹುಲಿ ಸಂರಕ್ಷಣೆಯಲ್ಲಿ ದೇಶವು ಜಗತ್ತಿಗೆ ಮಾದರಿಯಾಗಿ ಹೊರಹೊಮ್ಮಿದೆ ಎಂದು ಭೂಪೇಂದ್ರ ಯಾದವ್ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಉಲ್ಲೇಖಿಸಿದ್ದಾರೆ. ಹುಲಿ ಸಂರಕ್ಷಣೆ ಎಂದರೆ ಕೇವಲ ಪ್ರಭೇದಗಳನ್ನು ಉಳಿಸುವುದಲ್ಲ ಎಂದು ಅವರು ಹೇಳಿದ್ದಾರೆ. ಹೆಚ್ಚುತ್ತಿರುವ ಹುಲಿಗಳ ಸಂಖ್ಯೆಯು ಅವುಗಳು ವಾಸಿಸುವ ಕಾಡುಗಳ ಆರೋಗ್ಯವನ್ನು ಸಂಕೇತಿಸುತ್ತದೆ ಎಂದು ಸಚಿವರು ಹೇಳಿದರು. ಹುಲಿಗಳು ಮತ್ತು ಅವುಗಳ ಪರಿಸರ ವ್ಯವಸ್ಥೆಯನ್ನು ರಕ್ಷಿಸಲು ಪ್ರತಿಯೊಬ್ಬರೂ ಪ್ರತಿಜ್ಞೆ ಮಾಡಬೇಕೆಂದು. ಏಕೆಂದರೆ ಇದು ಸಮುದಾಯಗಳಿಗೆ ಜೀವನೋಪಾಯದ ಅವಕಾಶಗಳನ್ನು ಸಹ ಬೆಂಬಲಿಸುತ್ತದೆ ಎಂದು ಅವರು ಹೇಳಿದ್ದಾರೆ. ವಿಶ್ವಾದ್ಯಂತ ಹುಲಿ ಸಂರಕ್ಷಣೆ ಮತ್ತು ನಿರ್ವಹಣೆಯನ್ನು ಹೆಚ್ಚಿಸುವ ಸಂಘಟಿತ ಪ್ರಯತ್ನದಲ್ಲಿ ಎಲ್ಲಾ ಹುಲಿ ಶ್ರೇಣಿಯ ದೇಶಗಳನ್ನು ಒಗ್ಗೂಡಿಸುವ ಗುರಿಯೊಂದಿಗೆ ೨೦೧೦ ರ ಜುಲೈ ೨೯ ರಂದು ಸೇಂಟ್ ಪೀಟರ್ಸ್ ಬರ್ಗ್ ನಲ್ಲಿ ಈ ದಿನವನ್ನು ಆಚರಿಸುವ ಘೋಷಣೆಯನ್ನು ಮಾಡಲಾಯಿತು. ಈ ಭವ್ಯವಾದ ಜೀವಿಗಳು ಎದುರಿಸುತ್ತಿರುವ ಸವಾಲುಗಳು ಮತ್ತು ಅವರ ಭವಿಷ್ಯವನ್ನು ರಕ್ಷಿಸಲು ಮಾಡುತ್ತಿರುವ ಪ್ರಯತ್ನಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವು ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ.

<><><>

ದೇಶದ ಹಲವು ಭಾಗಗಳಲ್ಲಿ ಮಳೆಯ ಅಬ್ಬರ ಮುಂದುವರಿದಿದೆ. ಪೂರ್ವ ರಾಜಸ್ಥಾನ, ಬಿಹಾರ, ಹಿಮಾಚಲ ಪ್ರದೇಶ, ಮಧ್ಯಪ್ರದೇಶ ಮತ್ತು ಪಶ್ಚಿಮ ಉತ್ತರ ಪ್ರದೇಶದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿ, ಹರಿಯಾಣ, ಚಂಡೀಗಢ, ಗುಜರಾತ್, ಕರ್ನಾಟಕ, ಒಡಿಶಾ, ಪಶ್ಚಿಮ ಬಂಗಾಳ, ಜಾರ್ಖಂಡ್, ಕೇರಳ, ಮಾಹೆ ಮತ್ತು ಈಶಾನ್ಯ ರಾಜ್ಯಗಳ ಕೆಲವು ಭಾಗಗಳಲ್ಲಿ ದಿನವಿಡೀ ಮಧ್ಯಮದಿಂದ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಬಿಹಾರ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಪಶ್ಚಿಮ ಬಂಗಾಳ, ಜಾರ್ಖಂಡ್, ಸಿಕ್ಕಿಂ ಮತ್ತು ಒಡಿಶಾದ ಕೆಲವು ಭಾಗಗಳಲ್ಲಿಯೂ  ಇಂದು ಗುಡುಗು ಮತ್ತು ಗಾಳಿಯೊಂದಿಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕಳೆದ ರಾತ್ರಿ, ವಸಂತ್ ವಿಹಾರ್ ಸೇರಿದಂತೆ ರಾಷ್ಟ್ರ ರಾಜಧಾನಿಯ ಹಲವಾರು ಭಾಗಗಳು ಭಾರಿ ಮಳೆಯಿಂದಾಗಿ ಜಲಾವೃತಗೊಂಡು ರಸ್ತೆ ಸಂಚಾರಕ್ಕೆ ಅಡ್ಡಿಯುಂಟಾಗಿದೆ.

<><><>

ಚೀನಾದ ಮಕಾವ್ ನಲ್ಲಿ ಇಂದಿನಿಂದ ಮಕಾವ್ ಓಪನ್ ಸೂಪರ್ ಬ್ಯಾಡ್ಮಿಂಟನ್ ಟೂರ್ನಿ ಆರಂಭವಾಗಲಿದೆ. ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ಪುರುಷರ ಡಬಲ್ಸ್ ವಿಭಾಗದಲ್ಲಿ ಋತುವಿನ ಮೊದಲ ಪ್ರಶಸ್ತಿಗಾಗಿ ಎದುರು ನೋಡುತ್ತಿದ್ದಾರೆ. ಪುರುಷರ ಸಿಂಗಲ್ಸ್ ನಲ್ಲಿ ಲಕ್ಷ್ಯ ಸೇನ್, ಎಚ್.ಎಸ್. ಪ್ರಣಯ್ ಮತ್ತು ಮಹಿಳಾ ಸಿಂಗಲ್ಸ್ ನಲ್ಲಿ ಉನ್ನತಿ ಹೂಡಾ ಆಕರ್ಷಣೆಯ ಕೇಂದ್ರ ಬಿಂದುವಾಗಿದ್ದಾರೆ.

<><><><>

ಜಾರ್ಖಂಡ್ ನ ದಿಯೋಘರ್- ಹನ್ಸ್ ದಿಹಾ ರಸ್ತೆಯ ಮೋಹನ್ಪುರ ಬ್ಲಾಕ್ ನ ಜಮುನಿಯಾ ಚೌಕ್ ಬಳಿ ಇಂದು ಬೆಳಿಗ್ಗೆ ಬಸ್ ಮತ್ತು ಟ್ರಕ್ ನಡುವೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಕನ್ವಾರಿಯಾ ಯಾತ್ರಾರ್ಥಿಗಳು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ೨೦ ಕ್ಕೂ ಹೆಚ್ಚು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಸದರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಗೊಂಡವರ ಸ್ಥಿತಿ ಗಂಭೀರವಾಗಿದೆ ಮತ್ತು ಈ ಅಪಘಾತದಲ್ಲಿ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹೇಳಲಾಗಿದೆ.

<><><><>

ಅಮೆರಿಕದ ಮ್ಯಾನ್ಹ್ಯಾಟನ್ ಕಚೇರಿ ಕಟ್ಟಡದೊಳಗೆ ಬಂದೂಕುಧಾರಿಯೊಬ್ಬ ಗುಂಡು ಹಾರಿಸಿದ ಪರಿಣಾಮ ನ್ಯೂಯಾರ್ಕ್ ಪೊಲೀಸ್ ಇಲಾಖೆಯ ಅಧಿಕಾರಿ ಸೇರಿದಂತೆ ಐದು ಜನರು ಮೃತಪಟ್ಟಿದ್ದು, ಹಲವಾರು ಜನರು ಗಾಯಗೊಂಡಿದ್ದಾರೆ. ೨೭ ವರ್ಷದ ಶಂಕಿತನನ್ನು ಶೇನ್ ತಮುರಾ ಎಂದು ಗುರುತಿಸಲಾಗಿದ್ದು, ಈತ ಗಗನಚುಂಬಿ ಕಟ್ಟಡದ ೩೩ನೇ ಮಹಡಿಯಲ್ಲಿ ಸ್ವಯಂ ಪ್ರೇರಿತ ಗುಂಡು ಹಾರಿಸಿಕೊಂಡು ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

<><><><>

ಚೀನಾದಲ್ಲಿ, ಬೀಜಿಂಗ್ ಮತ್ತು ಅದರ ನೆರೆಯ ಪ್ರದೇಶದಲ್ಲಿ ಭಾರಿ ಮಳೆ ಮತ್ತು ಪ್ರವಾಹದಿಂದ ೩೦ ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ರಾಜಧಾನಿಯಿಂದ ಇನ್ನೂ ಹಲವರನ್ನುಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ಚೀನಾದ ರಾಜ್ಯ ಮಾಧ್ಯಮ ವರದಿ ಮಾಡಿದೆ. ನಿನ್ನೆ ಮಧ್ಯರಾತ್ರಿಯ ವೇಳೆಗೆ, ಬೀಜಿಂಗ್ ನ ತೀವ್ರ ಪೀಡಿತ ಮಿಯುನ್ ಜಿಲ್ಲೆಯಲ್ಲಿ ೨೮ ಜನರು ಮತ್ತು ಯಾನ್ಕಿಂಗ್ ಜಿಲ್ಲೆಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ಅಲ್ಲಿನ ಮಾಧ್ಯಮಗಳು ವರದಿ ಮಾಡಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>